ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

AU – 4J Part – IVA	ಬೆಂಗಳೂರು, ಸೋಮವಾರ,19,ಅಕ್ಟೋಬರ್, 2020(ಆಶ್ವಯುಜ, 27, ಶಕವರ್ಷ ೧೯೪2) Bengaluru, MONDAY, 19, OCTOBER, 2020(Aashwayuja,27, ShakaVarsha 1942)	ನಂ. 477 No. 477

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 56 ಶಾಸನ 2020, ಬೆಂಗಳೂರು, ದಿನಾಂಕ:19.10.2020

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂ‍ಬಿದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ವಿಧೇಯಕ, 2020- ಇದಕ್ಕೆ 2020 ರ ಅಕ್ಟೋಬರ್ ತಿಂಗಳ 16ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020 ರ ಕರ್ನಾಟಕ ಅಧಿನಿಯಮ ಸಂಖ್ಯೆ : 42 ಎಂಬುದಾಗಿ ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 42

(2020 ರ ಅಕ್ಟೋಬರ್ ತಿಂಗಳ 19 ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂ‍ಬಿದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020

(2020ರ ಅಕ್ಟೋಬರ್ ತಿಂಗಳ 16ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂ‍ಬಿದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012ನ್ನು (2013ರ ಕರ್ನಾಟಕ ಅಧಿನಿಯಮ 12) ನಿರಸನಗೊಳಿಸಲು ಒಂದು ಅಧಿನಿಯಮ;

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂ‍ಬಿದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012ನ್ನು (2013ರ ಕರ್ನಾಟಕ ಅಧಿನಿಯಮ 12) ನಿರಸನಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂಬ್ಬಿದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು 28.08.2020 ರಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. **ನಿರಸನ ಮತ್ತು ಉಳಿಸುವಿಕೆಗಳು.**- ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂಬ್ಬಿದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012ನ್ನು (2013ರ ಕರ್ನಾಟಕ ಅಧಿನಿಯಮ 12) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ)ಈ ಮೂಲಕ ನಿರಸನಗೊಳಿಸಲಾಗಿದೆ :

ಪರಂತು ಅಂಥ ನಿರಸನವು,-

(ಎ) ಹಾಗೆ ನಿರಸನಗೊಂಡ ಯಾವುದೇ ಅಧಿನಿಯಮದ ಅಥವಾ ಅದರ ಮೇರೆಗೆ ಕ್ರಮಬದ್ಧವಾಗಿ ಮಾಡಲಾದ ಅಥವಾ ಮಾಡಲೆಡೆಗೊಟ್ಟ ಯಾವುದೇ ಕಾರ್ಯದ ಪೂರ್ವಜಾರಿಯನ್ನು ಬಾಧಿಸತಕ್ಕದ್ದಲ್ಲ; ಅಥವಾ

(ಬಿ) ಹಾಗೆ ನಿರಸಿತವಾದ ಯಾವುದೇ ಅಧಿನಿಯಮದ ಮೇರೆಗೆ ಆರ್ಜಿಸಲಾದ, ಪ್ರಾಪ್ತವಾದ ಅಥವಾ ವಹಿಸಲಾದ ಯಾವುದೇ ಹಕ್ಕು, ವಿಶೇಷಾಧಿಕಾರ, ಬಾಧ್ಯತೆ ಅಥವಾ ಹೊಣೆಗಾರಿಕೆಯನ್ನು ಬಾಧಿಸತಕ್ಕದ್ದಲ್ಲ; ಅಥವಾ

(ಸಿ) ಹಾಗೆ ನಿರಸನವಾದ ಯಾವುವೇ ಅಧಿನಿಯಮಗಳ ವಿರುದ್ಧ ಮಾಡಲಾದ ಯಾವುದೇ ಅಪರಾಧಕ್ಕೆ ಸಂಬಂಧಿಸಿದಂತೆ, ಗುರಿಯಾದ ಯಾವುದೇ ದಂಡ, ಮುಟ್ಟುಗೋಲು ಅಥವಾ ಶಿಕ್ಷೆಯನ್ನು ಬಾಧಿಸತಕ್ಕದ್ದಲ್ಲ; ಅಥವಾ

(ಡಿ) ಮೇಲೆ ಹೇಳಿದಂಥ ಯಾವುದೇ ಹಕ್ಕು, ವಿಶೇಷಾಧಿಕಾರ, ಬಾಧ್ಯತೆ, ಹೊಣೆಗಾರಿಕೆ, ದಂಡ, ಮುಟ್ಟುಗೋಲು ಅಥವಾ ಶಿಕ್ಷೆಗೆ ಸಂಬಂಧಿಸಿದ ಯಾವುದೇ ತನಿಖೆ, ಕಾನೂನು ವ್ಯವಹರಣೆ ಅಥವಾ ಪರಿಹಾರೋಪಾಯವನ್ನು ಬಾಧಿಸತಕ್ಕದ್ದಲ್ಲ; ಮತ್ತು ನಿರಸನಗೊಳಿಸುವ ಅಧಿನಿಯಮವನ್ನು ಅಂಗೀಕರಿಸಿಲ್ಲದಿದ್ದರೆ ಹೇಗೋ ಹಾಗೆ ಅಂಥ ಯಾವುದೇ ತನಿಖೆಯನ್ನು, ಕಾನೂನು ವ್ಯವಹರಣೆಯನ್ನು ಅಥವಾ ಪರಿಹಾರೋಪಾಯವನ್ನು ನಡೆಸಬಹುದು, ಮುಂದುವರೆಸಬಹುದು ಅಥವಾ ಜಾರಿಗೆ ತರಬಹುದು ಮತ್ತು ಅಂಥ ಯಾವುದೇ ದಂಡ, ಮುಟ್ಟುಗೋಲು ಅಥವಾ ಶಿಕ್ಷೆಯನ್ನು ವಿಧಿಸಬಹುದು.

3. **2020ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 20ರ ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂಬ್ಬಿದಿಯ ವರ್ಗಾವಣೆ ನಿಯಂತ್ರಣ) ಅಧ್ಯಾದೇಶ, 2020ನ್ನು (2020ರ ಕರ್ನಾಟಕ ಅಧ್ಯಾದೇಶ 20) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಅದನ್ನು ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ದ್ವಾರಕನಾಥ್ ಬಾಬು)
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

PARLIAMENTARY AFFAIRS AND LEGISLATION SECRETARIAT

NOTIFICATION

No. DPAL 56 SHASANA 2020, Bengaluru, Dated: 19.10.2020

Ordered that the translation of ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂಬ್ಬಿದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 42) in English language, be published as authoritative text as required by clause (3) of Article 348 of the Constitution of India in the Karnataka Gazette Extra-ordinary for general information.

The following translation of ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬಂಬ್ಬಿದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ:42) in English language, is published in the Official Gazette under the authority of the Governor of Karnataka under clause (3) of Article 348 of the Constitution of India

KARNATAKA ACT NO. 42 OF 2020

(First published in the Karnataka Gazette Extra-ordinary on the 19th day of October 2020)

THE KARNATAKA STATE CIVIL SERVICE (REGULATION OF TRANSFER OF STAFF OF DEPARTMENT OF TECHNICAL EDUCATION) (REPEAL) ACT, 2020

(Received the assent of the Governor on the 16th day of October, 2020)

An Act to repeal the Karnataka State Civil Services (Regulation of transfer of staff of Department of Technical Education) Act, 2012 (Karnataka Act 12 of 2013);

Whereas, it is expedient to repeal the Karnataka State Civil Services (Regulation of transfer of staff of Department of Technical Education) Act, 2012 (Karnataka Act 12 of 2013) for the purposes hereinafter appearing;

Be it enacted by the Karnataka State Legislature in the seventy-first year of the Republic of India as follows:-

1. Short title and commencement.- (1) This Act may be called the Karnataka State Civil Services (Regulation of transfer of staff of Department of Technical Education) (Repeal) Act, 2020.

(2) It shall be deemed to have come into force with effect from 28.08.2020.

2. Repeal and savings.- The Karnataka State Civil Services (Regulation of transfer of staff of Department of Technical Education) Act, 2012 (Karnataka Act 12 of 2013) (hereinafter referred to as the principal Act) is hereby repealed:

Provided that, such repeal shall not affect,-

(a) the previous operation of the Act so repealed or anything duly done or suffered thereunder; or

(b) any right, privilege, obligation or liability acquired, accrued or incurred under the Act, so repealed; or

(c) any penalty, forfeiture, or punishment incurred in respect of any offence committed under the Act so repealed; or

(d) any investigation, legal proceeding, or remedy in respect of any such right, privilege, obligation, liability, penalty, forfeiture or punishment as aforesaid; and any such investigation, legal proceedings or remedy may be instituted, continued or enforced and any such penalty, forfeiture and punishment may be imposed, as if this Act had not been passed.

3. Repeal of Karnataka Ordinance No. 20 of 2020 and savings.- (1) The Karnataka State Civil Services (Regulation of transfer of staff of Department of Technical Education) Ordinance, 2020 (Karnataka Ordinance 20 of 2020) is hereby repealed.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**

(2) Notwithstanding such repeal, anything done or any action taken under the principal Act, as amended by the said Ordinance, shall be deemed to have been done or taken under the principal Act, as amended by this Act.

The above translation of ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬಂ್ಬದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ 42) be published in the official Gazette under clause(3)of Article 348 of the Constitution of India.

VAJUBHAI VALA
GOVERNOR OF KARNATAKA
By Order and in the name of
the Governor of Karnataka,

(K.DWARAKANATH BABU)
Secretary to Government
Department of Parliamentary Affairs
and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು.

SUNIL GARDE